ಕನ್ನಡಪ್ರಭ
ಮಂಗಳವಾರ 5.05.2026

ಹೆಚ್ಚಿನ ಸುದ್ದಿಗಳು ಪುಟ 13

ಗರಿಷ್ಠ 34 c | ಕನಿಷ್ಠ 23 c

ಸುದ್ದಿ ಸಿಂಚನ

ಇಂಡಿಯನ್ ಪಬ್ಲಿಕ್ ಶಾಲೆಗೆ ಶೇ.100 ಫಲಿತಾಂಶ



ತುರುವೇಕೆರೆ: ಇಲ್ಲಿಯ ಹೊರಪೇಟೆಯ ವಿರಕ್ತ ಮಠದ ಆವರಣದಲ್ಲಿರುವ ಇಂಡಿಯನ್ ಪಬ್ಲಿಕ್ ಸ್ಕೂಲ್ ಸತತವಾಗಿ 9 ನೇ ಬಾರಿಗೆ ಐಸಿಎಸ್ ಇ ಪಠ್ಯಕ್ರಮದ ಹತ್ತನೇ ತರಗತಿಯಲ್ಲಿ ಶೇ. 100 ರಷ್ಟು ಫಲಿತಾಂಶವನ್ನು ಗಳಿಸಿದೆ ಎಂದು ಶಾಲೆಯ ಆಡಳಿತಾಧಿಕಾರಿ ಡಾ. ರುದ್ರಯ್ಯ ಹಿರೇಮಠ ತಿಳಿಸಿದ್ದಾರೆ. 25-26 ನೇ ಸಾಲಿನಲ್ಲಿ 52 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ ಎಲ್ಲರೂ ತೇರ್ಗಡೆಯಾಗಿದ್ದಾರೆ. ಇವರಲ್ಲಿ ಬಿ. ಶ್ರೇಯಸ್ ಶೇ. 97 ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಗಳಿಸಿದ್ದಾನೆ. ಸ್ನೇಹಿತ್ ಗೌಡ ಶೇ. 93 ಅಂಕ ಗಳಿಸಿ ಎರಡನೇ ಸ್ಥಾನ ಪಡೆದಿದ್ದರೆ, ಎಸ್. ಕುಸುಮಾ ಮತ್ತು ಮಿಥೇಶ್ ರಾಘವ್ ಶೇ. 90 ರಷ್ಟು ಅಂಕ ಗಳಿಸಿ ಮೂರನೇ ಸ್ಥಾನವನ್ನುಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದರು. ಶಾಲೆಗೆ ನೂರು ಫಲಿತಾಂಶ ತಂದುಕೊಟ್ಟ ವಿದ್ಯಾರ್ಥಿಗಳು, ಪೋಷಕರು, ಶಾಲಾ ಪ್ರಾಂಶುಪಾಲೆ ಪುಷ್ಪಾ ಎಸ್ ಪಾಟೀಲ್ ರವರಿಗೆ ಸಂಸ್ಥೆಯ ಅಧ್ಯಕ್ಷ ಶ್ರೀ ಡಾ. ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಮಹಾಸ್ವಾಮೀಜಿ ಅಭಿನಂದನೆ ಸಲ್ಲಿಸಿದ್ದಾರೆ.

ತುಮಕೂರು-ದಾವಣಗೆರೆ ರೈಲ್ವೆ ಯೋಜನೆಗೆ 1300 ಕೋಟಿ ರು. ಬಿಡುಗಡೆ

ತುಮಕೂರು: ತುಮಕೂರು-ದಾವಣಗೆರೆ ರೈಲು ಮಾರ್ಗ ಯೋಜನೆಗೆ ಆರಂಭದಲ್ಲಿ 1801 ಕೋಟಿ ರು. ಮಂಜೂರು ಮಾಡಲಾಗಿದ್ದು, ಈಗಾಗಲೇ 1300 ಕೋಟಿ ರು. ಬಿಡುಗಡೆ ಮಾಡಲಾಗಿದೆ ಎಂದು ನವದೆಹಲಿಯ ಕರ್ನಾಟಕ ರಾಜ್ಯ ವಿಶೇಷ ಪ್ರತಿನಿಧಿ ಹಾಗೂ ಶಿರಾ ಶಾಸಕ ಟಿ.ಬಿ. ಜಯಚಂದ್ರ ಅವರು ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಮಾತನಾಡಿದರು. ಅಮೃತ್ ಸರೋವರ ಯೋಜನೆ ಅಡಿಯಲ್ಲಿ ಶಿರಾ ಭಾಗದಲ್ಲಿ ಬರುವ 35 ಕೆರೆಗಳಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ ಸದನದಲ್ಲಿಯೂ ಪ್ರಸ್ತಾಪ ಮಾಡಲಾಗಿದೆ ಎಂದು ತಿಳಿಸಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳಡಿ ನಡೆಯುತ್ತಿರುವ ಕಾಮಗಾರಿಗಳನ್ನು ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಪೂರ್ಣಗೊಳಿಸುವುದು ಅತ್ಯಗತ್ಯವಾಗಿದ್ದು, ಈ ಮೂಲಕ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಸಹಕಾರ ನೀಡಬೇಕು. ಕಾಮಗಾರಿಗಳು ವಿಳಂಬವಾದರೆ ಕೇವಲ ಸರ್ಕಾರಕ್ಕೆ ಹೊರೆಯಷ್ಟೇ ಅಲ್ಲ ಗುತ್ತಿಗೆದಾರರಿಗೆ ಸಮಸ್ಯೆಯಾಗುತ್ತದೆ. ಜೊತೆಗೆ ಜನರಿಗೆ ಅದರಿಂದಾಗುವ ತೊಂದರೆಗಳು ಸಹ ಹೆಚ್ಚುತ್ತವೆ. ಮುಖ್ಯವಾಗಿ ರಸ್ತೆ, ಚರಂಡಿ, ಸೇರಿದಂತೆ ಮೂಲ ಸೌಕರ್ಯಗಳ ಕಾಮಗಾರಿಗಳು ವೇಗ ನೀಡಬೇಕು ಎಂದು ಕರೆ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಪಂ ಸಿಇ ಅಶ್ವಿಜ ಬಿ.ವಿ. ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಇದ್ದರು.

ನಾಳೆಯಿಂದ ಕೆಲವೆಡೆ ವಿದ್ಯುತ್ ವ್ಯತ್ಯಯ

ತಿಪಟೂರು: ನಗರದ ಹಾಸನ ರಸ್ತೆಯಲ್ಲಿ ರೈಲ್ವೆ ಮೇಲ್ಸೇತುವೆ ಪಕ್ಕದ 11ಕೆವಿ ಮತ್ತು ಸೆಕೆಂಡರಿ ಮಾರ್ಗವನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದರಿಂದ ಮೇ.6ರಿಂದ 10ರವರೆಗೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಶಾರದಾನಗರ, ತಡಸೂರು, ಹೊನ್ನೆಹಳ್ಳಿ, ಚಟ್ನಹಳ್ಳಿ, ಗುರುಗದಹಳ್ಳಿ, ಮಡೆನೂರು, ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸಬೇಕೆಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ಪ್ರಸರಣ ವಿಭಾಗ
ಕನ್ನಡಪ್ರಭ ಪತ್ರಿಕೆ ಬಂದಿಲ್ಲವೆ, ತಡವಾಗಿ ಬರುತ್ತಿದೆಯೆ,
ಪತ್ರಿಕೆ ನಿಮ್ಮ ಮನೆಗೆ ಹಾಕಿಸಿಕೊಳ್ಳಬೇಕೆ ಸಂಪರ್ಕಿಸಿ:
ಸಂಗಮೇಶ್ ಆರ್: 8971199191
CONNECT



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ನವದೆಹಲಿಯ ಕರ್ನಾಟಕ ರಾಜ್ಯ ವಿಶೇಷ ಪ್ರತಿನಿಧಿ ಹಾಗೂ ಶಿರಾ ಶಾಸಕ ಟಿ.ಬಿ. ಜಯಚಂದ್ರ ಅಧಿಕಾರಿಗಳ ಜೊತೆಗೆ ಚರ್ಚೆ ನಡೆಸಿದರು.

ಪತ್ನಿ ಕೊಂದ ಪತಿಗೆ ಜೀವಾವಧಿ ಶಿಕ್ಷೆ ವಿಧಿಸಿದ ಜಿಲ್ಲಾ ಸತ್ರ ನ್ಯಾಯಾಲಯ

ತುಮಕೂರು: ತನ್ನ ಪತ್ನಿಯನ್ನು ಪತಿಯೇ ಮಚ್ಚಿನಿಂದ ಹೊಡೆದು ಕುತ್ತಿಗೆಯನ್ನು ವೇಲ್ ನಿಂದ ಜೀರಿ ಕೊಲೆ ಮಾಡಿದ ಆರೋಪ ಸಾಬೀತಾಗಿದ್ದರಿಂದ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು ನ್ಯಾಯಾಧೀಶ ರಾದ ಶಿಲ್ಪ.ಕೆ.ಎಸ್. ರವರು ಆರೋಪಿ ಜಗದೀಶ ಗೆ ಜೀವಾವಧಿ ಶಿಕ್ಷೆ ಮತ್ತು 25 ಸಾವಿರ ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಏಪ್ರಿಲ್ 19, 2022 ರಂದು ಮಧ್ಯಾಹ್ನ 3 ಗಂಟೆಯಿಂದ 3-30 ರ ಸಮಯದಲ್ಲಿ ಗುಬ್ಬಿಯ ಕಾಯಿ ಪೇಟೆಯ ಮನೆಯಲ್ಲಿ ಇವರಿಬ್ಬರ ನಡುವೆ ನಿಶ್ಚಿತಾರ್ಥಕ್ಕೆ ಹೋಗುವ ವಿಚಾರದಲ್ಲಿ ಗಲಾಟೆಯಾಗಿ ಈ ಕೃತ್ಯವೆಸಗಿದ್ದಾನೆ. ಇವರಿಬ್ಬರು 15 ವರ್ಷಗಳ ಹಿಂದೆ ಮದುವೆಯಾಗಿದ್ದು, ಮಕ್ಕಳಿರಲಿಲ್ಲ. ಆರೋಪಿ ಜಗದೀಶ್‌ರವರಿಗೆ ಮದ್ಯಪಾನ ಮಾಡುವ ಹಾಗೂ ಬೇರೆ ಹೆಂಗಸರ ಸಹವಾಸ ಇದ್ದು, ಇದರಿಂದ ಹೆಂಡತಿ ಶಿಲ್ಪರವರು ಜಗಳವಾಡುತ್ತಿದ್ದರು. ಆರೋಪಿ ಜಗದೀಶ ತನ್ನ ಹೆಂಡತಿ ಶಿಲ್ಪರವರ ಜೊತೆ ಬೇಜಾರು ಮಾಡಿಕೊಂಡು ದ್ವೇಷ ಸಾಧಿಸುತ್ತಿದ್ದು, ಇದೇ ದ್ವೇಷ ಇಟ್ಟುಕೊಂಡು ಈ ಕೃತ್ಯವೆಸಗಿರುವುದು ಸಾಬೀತಾಗಿದೆ. ಆರೋಪಿ ವಿರುದ್ಧ ಗುಬ್ಬಿ ಸರ್ಕಲ್ ಇನ್ಸ್‌ಪೆಕ್ಟರ್ ನದಾಫ್ ಎಫ್.ಕೆ. ರವರು ತನಿಖೆ ಪೂರೈಸಿ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರವನ್ನು ಸಲ್ಲಿಸಿದ್ದರು. ಸರ್ಕಾರದ ಪರವಾಗಿ ಅಭಿಯೋಜಕ ಕೆ.ಸಿ.ದೀಪಕ್ ಅವರು ವಾದ ಮಂಡಿಸಿದ್ದರು.

ಲಕ್ಷ್ಮೀ ನರಸಿಂಹ ಸ್ವಾಮಿಗೆ ಹೂವಿನ ಅಲಂಕಾರ



ಗುಬ್ಬಿ: ತಾಲೂಕಿನ ಎಂ.ಎಚ್. ಪಟ್ಟಣ ಗ್ರಾಮದ ಲಕ್ಷ್ಮೀ ನರಸಿಂಹ ಸ್ವಾಮಿ ದೇವಾಲಯದಲ್ಲಿ ವಿಶೇಷ ಪಂಚಾಮೃತ, ರುದ್ರಾಭಿಷೇಕ ಹಾಗೂ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಕಾರ್ಯಕ್ರಮಕ್ಕೆ ಗ್ರಾಮದ ಭಕ್ತಾದಿಗಳು ಭಾಗವಹಿಸಿ ಪೂಜೆಯನ್ನು ಸಲ್ಲಿಸಿದರು. ಬಂದ ಭಕ್ತಾದಿಗಳಿಗೆ ತೀರ್ಥ ಪ್ರಸಾದ ನೀಡಲಾಯಿತು.

ಪಿಡಿಒಗಳಿಗೆ ಸೂಕ್ತ ಸೇವಾ ಭದ್ರತೆ ಒದಗಿಸಿ

ರಾಜ್ಯ ಪಂಚಾಯಿತ್ತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕ ಆಗ್ರಹ | ಜಿಪಂ ಕಾರ್ಯದರ್ಶಿಗೆ ಮನವಿ ಪತ್ರ ಸಲ್ಲಿಕೆ

• **ಕನ್ನಡಪ್ರಭ ವಾರ್ತೆ** ತುಮಕೂರು

ಕೊತಬಾಲ ಗ್ರಾಪಂ ಪಿಡಿಒ ಮುಕ್ತಂಹುಸೇನ ಕರಡಿಗುಡ್ಡ ಅವರ ಆತ್ಮಹತ್ಯೆ ಪ್ರಕರಣದ ಸಮಗ್ರ ತನಿಖೆ ನಡೆಸುವಂತೆ ಹಾಗೂ ರಾಜ್ಯದ ಎಲ್ಲಾ ಪಿಡಿಒಗಳಿಗೆ ಸೇವಾರಕ್ಷಣೆ ಒದಗಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ವತಿಯಿಂದ ಜಿ.ಪಂ. ಉಪಕಾರ್ಯದರ್ಶಿ (ಆಡಳಿತ) ಈಶ್ವರಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ನಗರದ ಜಿ.ಪಂ. ಕಚೇರಿಯಲ್ಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರಾಜ್ ಆರ್. ಹಾಗೂ ಜಿಲ್ಲಾಧ್ಯಕ್ಷ ಸುಬ್ಬರಾಜ್ ಅರಸ್ ವಿ.ಆರ್. ರವರ ನೇತೃತ್ವದಲ್ಲಿ ಈಶ್ವರಪ್ಪರವರನ್ನು ಭೇಟಿ ಮಾಡಿದ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಹಾಗೂ ಪಿಡಿಒಗಳು ತಮ್ಮ ಬೇಡಿಕೆಯುಳ್ಳ ಮನವಿ ಪತ್ರವನ್ನು ಸಲ್ಲಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಗೆ ಕಳುಹಿಸಿಕೊಡುವಂತೆ ಮನವಿ ಮಾಡಿದರು.

ಅಸೂಟಿ ಮತ್ತು ಕೊತಬಾಲ ಎರಡು ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಯಾಗಿ (ಹೆಚ್ಚುವರಿ ಪ್ರಭಾರಸೇರಿ) ಕರ್ತವ್ಯ ನಿರ್ವಹಿಸುತ್ತಿದ್ದ ಮುಕ್ತಂಹುಸೇನ ಕರಡಿಗುಡ್ಡ ಅವರು ಅತಿಯಾದ ಕೆಲಸದ ಒತ್ತಡ, ಹಿಂದಿನ ಪ್ರಕರಣವೊಂದರ ಮೇಲಿದ್ದ ಲೋಕಾಯುಕ್ತ ತನಿಖೆ ಹಾಗೂ ವೇತನವಿಲ್ಲದೆ ಬೇಸತ್ತು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಇಡೀ ರಾಜ್ಯದ ಪಿಡಿಒ ಸಮುದಾಯವನ್ನು ತೀವ್ರ ಆಘಾತಕ್ಕೀಡು ಮಾಡಿದೆ. ಈ ಪ್ರಕರಣ ಕೇವಲ ಒಬ್ಬ ಅಧಿಕಾರಿಯ ದುರಂತವಲ್ಲ, ಬದಲಾಗಿ ಇಡೀ ರಾಜ್ಯದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಎದುರಿಸುತ್ತಿರುವ ನೈಜ ಮತ್ತು ಭೀಕರ ಪರಿಸ್ಥಿತಿಗೆ ಹಿಡಿದ ಕನ್ನಡಿಯಾಗಿದೆ. ಗ್ರಾಮೀಣಾಭಿವೃದ್ಧಿಯ ಆಧಾರ ಸ್ತಂಭವಾಗಿರುವ ಪಿಡಿಒಗಳು ಇಂದು ತೀವ್ರವಾದ ಕೆಲಸದ ಒತ್ತಡದಲ್ಲಿ ನಲುಗಿಹೋಗುತ್ತಿದ್ದಾರೆ ಎಂದು ತಮ್ಮ ಸಮಸ್ಯೆಯನ್ನು ಪಿಡಿಒಗಳು ಹೇಳಿಕೊಂಡರು.

ಸರ್ಕಾರಕ್ಕೆ ವರದಿ ಇಲ್ಲ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರ ಮೇಲೆ ನಡೆಯುತ್ತಿರುವ ನಿರಂತರ ಒತ್ತಡಗಳು ಹಾಗೂ ಸಂಭವಿಸುತ್ತಿರುವ ಅಕಾಲಿಕ ಸಾವುಗಳ ಕುರಿತು ಅಧ್ಯಯನ ಮಾಡಲು ಕಳೆದ ಒಂದು ವರ್ಷದ ಹಿಂದೆ ಮೀನಾಕ್ಷಿ ಸುಂದರಂ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಆದರೆ ಈ ಸಮಿತಿಯು ಇದುವರೆಗೂ ಸರ್ಕಾರಕ್ಕೆ ವರದಿ ಸಲ್ಲಿಸಿಲ್ಲ. ನೌಕರರ ಜೀವದ ಜತೆ ಚೆಲ್ಲಾಟವಾಡುತ್ತಿರುವ ಇಂತಹ ವ್ಯವಸ್ಥಿತ ಒತ್ತಡಗಳನ್ನು ತಡೆಯಲು ಈ ವರದಿ ಅತ್ಯಂತ ಅವಶ್ಯಕವಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪಿಡಿಒ ಮುಕ್ತಂಹುಸೇನ ಕರಡಿಗುಡ್ಡ ಅವರ ಆತ್ಮಹತ್ಯೆ ಪ್ರಕರಣದ ಬಗ್ಗೆ ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆಯಾಗಬೇಕು. ಅವರ ಕುಟುಂಬಕ್ಕೆ ಇಲಾಖೆಯಿಂದ ಸಿಗಬೇಕಾದ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು, ಬಾಕಿ ವೇತನವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಮತ್ತು ಅವರ ಕುಟುಂಬದ ಓರ್ವ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗರಾಜ್ ಆರ್. ಹಾಗೂ ಜಿಲ್ಲಾಧ್ಯಕ್ಷ ಸುಬ್ಬರಾಜ್ ಅರಸ್ ವಿ.ಆರ್., ಉಪಾಧ್ಯಕ್ಷರಾದ ತೇಜಸ್ವಿನಿ, ತೀರ್ಥ, ಖಜಾಂಜಿ ಮಂಜುನಾಥ್ ಎಸ್. ಎಸ್., ರಾಜ್ಯ ಪರಿಷತ್ ಸದಸ್ಯ ವೆಂಕಟೇಶ್ ಡಿ.ವಿ., ಸಂಘಟನಾ ಕಾರ್ಯದರ್ಶಿಗಳಾದ ಚಂದ್ರಹಾಸ ಎಸ್.ಎಲ್., ಎ. ಕೋಕಿಲ, ಕ್ರೀಡಾ ಕಾರ್ಯದರ್ಶಿ ಸುನೀಲ್‌ಕುಮಾರ್ ಎನ್., ಸಾಂಸ್ಕೃತಿಕ ಕಾರ್ಯದರ್ಶಿ ವಿಜಯಲಕ್ಷ್ಮಿ ಆರ್. ಪಾಟೀಲ್ ಸೇರಿದಂತೆ ಪದಾಧಿಕಾರಿಗಳು ಹಾಗೂ ಪಿಡಿಒಗಳು ಭಾಗವಹಿಸಿದ್ದರು.



ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದಿಂದ ಜಿ.ಪಂ. ಉಪಕಾರ್ಯದರ್ಶಿ (ಆಡಳಿತ) ಈಶ್ವರಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ವಿಚಾರಣೆ ನೆಪದಲ್ಲಿ ಕಿರುಕುಳ ಸಲ್ಲ

ಯಾವುದೇ ಅಧಿಕಾರಿಯ ಮೇಲೆ ಇಲಾಖಾ ವಿಚಾರಣೆ ಅಥವಾ ಲೋಕಾಯುಕ್ತ ಪ್ರಕರಣ ದಾಖಲಾಗಿದ್ದರೆ ಅದನ್ನು ನಿರ್ದಿಷ್ಟ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ವಿಚಾರಣೆ ನೆಪದಲ್ಲಿ ತಿಂಗಳುಗಟ್ಟಲೆ ಅಮಾನತಿನಲ್ಲಿಟ್ಟು, ಸ್ಥಳ ನಿಯುಕ್ತಿಗೊಳಿಸದೆ, ವೇತನವೂ ನೀಡದೆ ಅಧಿಕಾರಿಗಳನ್ನು ಮತ್ತು ಅವರ ಕುಟುಂಬವನ್ನು ಉಪವಾಸ ಕೆಡವುವ ವ್ಯವಸ್ಥೆ ಬದಲಾಗಬೇಕು. ವಿಚಾರಣಾ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಕಡ್ಡಾಯವಾಗಿ ಹಾಗೂ ಸಕಾಲದಲ್ಲಿ ಪಾವತಿಸಬೇಕು ಎಂದು ಪಿಡಿಒಗಳು ಮನವಿ ಮಾಡಿದರು.

ಎಸ್.ಐ.ಆರ್. ಜಾರಿಯ ಕುರಿತು ಸಮಾಲೋಚನಾ ಸಭೆ

ಸಾಂವಿಧಾನಿಕ ಹಕ್ಕುಗಳನ್ನು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದರ ಕುರಿತು ಮಾತುಕತೆ

• **ಕನ್ನಡಪ್ರಭ ವಾರ್ತೆ** ತುಮಕೂರು

ಚುನಾವಣಾ ಆಯೋಗದ ವಿವಾದಾತ್ಮಕ ಧೋರಣೆ ಮತ್ತು ಎಸ್ಐಆರ್‌ಜಾರಿ ವಿರುದ್ಧ ತುಮಕೂರಿನ ವಿಜ್ಞಾನ ಭವನದಲ್ಲಿ ಸರ್ವಪಕ್ಷಗಳ ಸಮಾಲೋಚನಾ ಸಭೆ ನಡೆಯಿತು.

ಕೇಂದ್ರ ಸರ್ಕಾರದ ಆಡಳಿತ ಪಕ್ಷದೊಂದಿಗೆ ಕೈಜೋಡಿಸಿ ಚುನಾವಣಾ ಆಯೋಗವು ಜನರ ಮೂಲಭೂತ ಮತದಾನದ ಹಕ್ಕನ್ನು ಕಸಿಯಲು ಯತ್ನಿಸುತ್ತಿರುವುದನ್ನು ಖಂಡಿಸಿ ಹಾಗೂ ಪ್ರಸ್ತಾವಿತ ಎಸ್ಐಆರ್‌ಪ್ರಕ್ರಿಯೆಯ ಸಾಧಕ-ಬಾಧಕಗಳ ಕುರಿತು ಚರ್ಚೆ ನಡೆಸಲಾಯಿತು.

ಈ ಹಿಂದೆ ದೇಶದ 13 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆದ ಎಸ್ಐಆರ್‌ಪ್ರಕ್ರಿಯೆಯಿಂದಾಗಿ ಜನಸಾಮಾನ್ಯರು ಎದುರಿಸಿದ ತೀವ್ರ ತೊಂದರೆಗಳ ಬಗ್ಗೆ ವಿಮರ್ಶೆ ನಡೆಸಲಾಯಿತು. ಕರ್ನಾಟಕದಲ್ಲಿ ಒಂದು ವೇಳೆ ಎಸ್ಐಆರ್‌ಜಾರಿಯಾದರೆ, ಜನತೆ ಇದನ್ನು ಸಂಘಟಿತವಾಗಿ ಹೇಗೆ ಎದುರಿಸಬೇಕು ಮತ್ತು ಸಾಂವಿಧಾನಿಕ ಹಕ್ಕುಗಳನ್ನು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದರ ಕುರಿತು ರೂಪುರೇಷೆ ಸಿದ್ಧಪಡಿಸಲಾಯಿತು. ವಿಷಯ ಮಂಡಿಸಿ ಮಾತನಾಡಿದ ಹಿರಿಯ ಹೋರಾಟಗಾರ ಸಿ. ಯತಿರಾಜು, ಪ್ರಜಾತಂತ್ರ ಸಂರಕ್ಷಣಾ ವೇದಿಕೆ ಹೆಸರಿನಲ್ಲಿ ಜಿಲ್ಲೆಯ ಎಲ್ಲ ಜನಪರ ಸಂಘಟನೆಗಳು ಮತ್ತು ರಾಜಕೀಯ ಪಕ್ಷಗಳು ಜೊತೆಯಾಗಿ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ತಂಡವಾಗಿ ಯಾರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಎಸ್.ಐ.ಆರ್.ಹುನ್ನಾರದ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು. ಕೇಂದ್ರದ ಜನವಿರೋಧಿ ನೀತಿಗಳ ವಿರುದ್ಧ ಧ್ವನಿ ಎತ್ತಲು ರಾಜ್ಯದ ಪ್ರಗತಿಪರ ಸಂಘಟನೆಗಳು ಮತ್ತು ಸಮಾನಮನಸ್ಕರು ಒಂದಾಗುವ ಅಗತ್ಯವಿದೆ ಎಂದರು.

ಲೋಕಶಾಹಿಯ ಅಡಿಪಾಯವಾಗಿರುವ ಮತದಾನದ ಹಕ್ಕಿನ ಮೇಲೆ ನಡೆಯುತ್ತಿರುವ ಈ ದಾಳಿಯು ಆತಂಕಕಾರಿಯಾಗಿದೆ. ಎಸ್ಐಆರ್‌ಕುರಿತಾಗಿ ಆತಂಕಿತರಾಗಿರುವ ಪ್ರತಿಯೊಬ್ಬ ನಾಗರಿಕರು, ಎಲ್ಲಾ ಸರ್ವಪಕ್ಷಗಳ ಮುಖಂಡರು ಹಾಗೂ ಪ್ರಗತಿಪರ ಚಿಂತಕರು ಈ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸಿ.ಯತಿರಾಜು ತಿಳಿಸಿದರು.

ಜಾಗೃತ ಕರ್ನಾಟಕದ ರಾಜ್ಯ ಸಮಿತಿ ಸದಸ್ಯ ಆದಂ ಖಾನ್ ಎಸ್ ಐಆರ್ ಕುರಿತು ಪಿಪಿಟಿ ಮೂಲಕ ಮಾಹಿತಿ ಹಂಚಿಕೊಂಡರು. ಸಮಾಲೋಚನಾ ಸಭೆಯಲ್ಲಿ ಎನ್. ಇಂದಿರಮ್ಮ, ರಾಮಚಂದ್ರಪ್ಪ ಕೆ. ಪ್ರಗತಿಪರ ಚಿಂತಕರಾದ ಕೆ. ದೊರೆರಾಜು. ನಿವೃತ್ತ ನೌಕರರ ಸಂಘದ ಬಾ ಹಾ ರಮಾಕುಮಾರಿ, ರೈತ ಸಂಘದ ಶಂಕರಪ್ಪ. ವೆಲ್ಫೇರ್‌ಪಾರ್ಟಿಯ ಜಿಲ್ಲಾಧ್ಯಕ್ಷರಾದ ತಾಜುದ್ದೀನ್ ಶರೀಫ್, ಸ್ಲಂ ಜನಾಂದೋಲನ ಕರ್ನಾಟಕದ ಅರುಣ್. ಅನುಪಮಾ. ಎಐಟಿಯುಸಿ ಸಂಘಟನೆಯ ಅಶ್ವತ್ ನಾರಾಯಣ್. ರಾಮಕೃಷ್ಣಪ್ಪ. ವಿಜ್ಞಾನ ಕೇಂದ್ರದ ಅಕ್ಕಮ್ಮ. ಜಮಾತೆ ಇಸ್ಲಾಮ್ ಹಿಂದ್ ಸಂಘಟನೆಯ ಮೊಹಮ್ಮದ್ ಖಲೀಲ್ ಖಾನ್. ಅಸಾದುಲ್ಲಾಖಾನ್. ಮುಮ್ತಾಜ್ ಅಹ್ಮದ್. ಓಮರ್‌ಫಯಾಜ್. ಉಮರ್ ಸಯ್ಯದ್ ವಿವಿಧ ಸಂಘಟನೆಯ ಪ್ರಮುಖರು ಪಾಲ್ಗೊಂಡಿದ್ದರು.



ಚುನಾವಣಾ ಆಯೋಗದ ವಿವಾದಾತ್ಮಕ ಧೋರಣೆ ಮತ್ತು ಎಸ್ಐಆರ್‌ಜಾರಿ ವಿರುದ್ಧ ತುಮಕೂರಿನ ವಿಜ್ಞಾನ ಭವನದಲ್ಲಿ ಸರ್ವಪಕ್ಷಗಳ ಸಮಾಲೋಚನಾ ಸಭೆ ನಡೆಯಿತು.

■ ಈ ಹಿಂದೆ ದೇಶದ 13 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆದ ಎಸ್ಐಆರ್ ಪ್ರಕ್ರಿಯೆಯಿಂದಾಗಿ ಜನ ಸಾಮಾನ್ಯರು ಎದುರಿಸಿದ ತೀವ್ರ ತೊಂದರೆಗಳ ಬಗ್ಗೆ ವಿಮರ್ಶೆ ನಡೆಸಲಾಯಿತು. ಕರ್ನಾಟಕದಲ್ಲಿ ಒಂದು ವೇಳೆ ಎಸ್ಐಆರ್‌ಜಾರಿಯಾದರೆ, ಜನತೆ ಇದನ್ನು ಸಂಘಟಿತವಾಗಿ ಹೇಗೆ ಎದುರಿಸಬೇಕು ಮತ್ತು ಸಾಂವಿಧಾನಿಕ ಹಕ್ಕುಗಳನ್ನು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದರ ಕುರಿತು ರೂಪುರೇಷೆ ಸಿದ್ಧಪಡಿಸಲಾಯಿತು.

ಸಾಮೂಹಿಕ ಉಚಿತ ಉಪನಯನ

• **ಕನ್ನಡಪ್ರಭ ವಾರ್ತೆ** ತುಮಕೂರು

ನಗರದ ಜಯನಗರ ಪಶ್ಚಿಮದಲ್ಲಿರುವ ಶ್ರೀ ಪದ್ಮಾವತಿ ವೆಂಕಟೇಶ್ವರಸ್ವಾಮಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಶ್ರೀ ಭಗವದ್ ರಾಮಾನುಜಾಚಾರ್ಯರ ತಿರುನಕ್ಷತ್ರದ ಪ್ರಯುಕ್ತ ಜಿಲ್ಲಾ ಶ್ರೀ ವೈಷ್ಣವ ಮಹಾಸಭಾ ವತಿಯಿಂದ ಉಚಿತ ಸಾಮೂಹಿಕ ಉಪನಯನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಜಿಲ್ಲಾ ಶ್ರೀ ವೈಷ್ಣವ ಮಹಾಸಭಾ ಹಾಗೂ ತಾಲೂಕು ಸಂಘಗಳ ವತಿಯಿಂದ ಶ್ರೀ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್‌ರವರ ದಿವ್ಯ ಸಾನ್ನಿಧ್ಯದಲ್ಲಿ ಸುಮಾರು 35 ವಟುಗಳಿಗೆ ಉಚಿತ ಸಾಮೂಹಿಕ ಉಪನಯನ ಮಾಡಲಾಯಿತು. ಮಕ್ಕಳು ಜನಿಸಿದ ತಕ್ಷಣ ಬ್ರಾಹ್ಮಣರಾಗುವುದಿಲ್ಲ. ಮಕ್ಕಳಿಗೆ ಸಂಸ್ಕಾರ ಕಲಿಸುವ ಉದ್ದೇಶದಿಂದ ಈ ಉಪನಯನ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ಆಗಮಿಕರಾದ ರವಿಶರ್ಮನ್ ತಿಳಿಸಿದರು. ಮಕ್ಕಳಿಗೆ ಗುರುಕುಲ ಅವಶ್ಯಕತೆ ಇರುತ್ತದೆ. ಹಾಗಾಗಿ ಶ್ರೀ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಸ್ವಾಮೀಜಿಯವರಿಂದ ವೇದಭ್ಯಾಸ ಮಾಡಲು ಈ ಕೈಂಕರ್ಯ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಈ ಉಚಿತ ಸಾಮೂಹಿಕ ಉಪನಯನ ಕಾರ್ಯಕ್ರಮದಲ್ಲಿ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಅನೇಕ ವಟುಗಳು ಪಾಲ್ಗೊಂಡುವ ಉಪನಯನ ಮಾಡಿಸಿಕೊಂಡರು ಎಂದು ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಸಕ ಜ್ಯೋತಿಗಣೇಶ್ ಹಾಗೂ ಜಿಲ್ಲೆಯ 500ಕ್ಕೂ ಅಧಿಕ ಮಂದಿ ವೈಷ್ಣವ ಬಂಧುಗಳು ಭಾಗವಹಿಸಿದ್ದರು.



ವಕೀಲರ ಸಹಕಾರವಿದ್ದರೆ ಕಕ್ಷಿದಾರರಿಗೆ ಶೀಘ್ರ ನ್ಯಾಯ: ನ್ಯಾ. ಮುನಿರಾಜು



ವರ್ಗಾವಣೆಗೊಂಡ ನ್ಯಾಯಾಧೀಶರಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು.

• **ಕನ್ನಡಪ್ರಭ ವಾರ್ತೆ** ತುಮಕೂರು

ವಕೀಲರು ಮತ್ತು ನ್ಯಾಯಾಧೀಶರು ಒಂದು ನಾಣ್ಯದ ಎರಡು ಮುಖಗಳಿದ್ದಂತೆ, ವಕೀಲರ ಸಹಕಾರವಿದ್ದರೆ ಕಕ್ಷಿದಾರರಿಗೆ ಶೀಘ್ರವಾಗಿ ನ್ಯಾಯದಾನ ಮಾಡಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಎನ್. ಮುನಿರಾಜು ತಿಳಿಸಿದರು.

ಜಿಲ್ಲಾ ವಕೀಲರ ಸಂಘದಿಂದ ಆಯೋಜಿಸಿದ್ದ ವರ್ಗಾವಣೆಗೊಂಡ ನ್ಯಾಯಾಧೀಶರುಗಳಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನೂರುನ್ನೀಸರವರು ಮಾತನಾಡಿ, ನಾನು ಕಳೆದ 4 ವರ್ಷದಿಂದ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು ಹಿರಿಯ ನಾಗರಿಕರು, ನೊಂದವರು ಪ್ರತಿದಿನ ಪ್ರಾಧಿಕಾರಕ್ಕೆ ಬರುತ್ತಿದ್ದರು. ಅವರ ಸಮಸ್ಯೆಗಳಿಗೆ ಶೀಘ್ರವಾಗಿ ಸ್ಪಂದಿಸಿ ಅವರ ಸಮಸ್ಯೆಗಳನ್ನು ಇತ್ಯರ್ಥಗೊಳಿಸಿ, ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳಲ್ಲಿ ರಾಜಿಪಂಚಾಯ್ತಿ ಮಾಡಿ ಹಲವಾರು ಕೇಸುಗಳನ್ನು ಮುಕ್ತಾಯಗೊಳಿಸಿದ್ದು ನನಗೆ ಹೆಮ್ಮೆ ತಂದಿದೆ, ಎಲ್ಲ ಧರ್ಮವು ಒಂದೇ ಹೇಳುವುದು ಎಲ್ಲರನ್ನು ಸಮಾನವಾಗಿ ಕಾಣಬೇಕು ದಯವೇ ಧರ್ಮದ ಮೂಲವಯ್ಯ ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಚ್. ಕೆಂಪರಾಜಯ್ಯ ಮಾತನಾಡಿ ವರ್ಗಾವಣೆಗೊಂಡ ನ್ಯಾಯಾಧೀಶರು ವಕೀಲರೊಂದಿಗೆ ಉತ್ತಮ ಭಾಂಧವ್ಯ ಹೊಂದಿದ್ದರು ಎಂದರು. ವೇದಿಕೆಯಲ್ಲಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಬಿ. ಜಯಂತಕುಮಾರ್, 1ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೆಚ್. ಅನಂತ ಉಪಸ್ಥಿತರಿದ್ದರು. ಶ್ರೀನಿವಾಸ್ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಹಿರೇಹಳ್ಳಿ ಮಹೇಶ್ ನಿರೂಪಿಸಿ ದರು. ವರ್ಗಾವಣೆಗೊಂಡ ನ್ಯಾಯಾಧೀಶರಿಗೆ ಜಿಲ್ಲಾ ವಕೀಲರ ಸಂಘದಿಂದ ಸನ್ಮಾನಿಸಿ ಗೌರವಿಸಲಾಯಿತು.

ಕೆಪಿಸಿಸಿ ವಕ್ತಾರೆ ಕುಸುಮಾ | ಬಿಜೆಪಿಯಿಂದ ಕಾಂಗ್ರೆಸ್ ಪಕ್ಷ ಮಹಿಳಾ ವಿರೋಧಿ ಎಂದು ಬಿಂಬಿಸುವ ಪ್ರಯತ್ನ

ಸಂಸತ್‌ನ ಕ್ಷೇತ್ರಗಳ ಪುನರ್‌ವಿಂಗಡಣೆಗೆ ಹೂಡಿದ ತಂತ್ರ

• **ಕನ್ನಡಪ್ರಭ ವಾರ್ತೆ** ತುಮಕೂರು

ಐದು ರಾಜ್ಯಗಳ ಚುನಾವಣೆ ಇರುವ ಸಂದರ್ಭದಲ್ಲಿ ಬಿಜೆಪಿ ನೇತೃತ್ವದ ಎನ್.ಡಿ.ಎ ಒಕ್ಕೂಟ ಲೋಕಸಭಾ ವಿಶೇಷ ಅಧಿವೇಶದಲ್ಲಿ ಮಂಡಿಸಿದ ಮಹಿಳಾ ಮೀಸಲು ಮಸೂದೆ ತೆರೆಮರೆಯಲ್ಲಿ ಲೋಕಸಭಾ ಕ್ಷೇತ್ರಗಳ ಪುನರ್‌ವಿಂಗಡನೆಗೆ ಹೂಡಿದ ತಂತ್ರವಾಗಿತ್ತು ಎಂದು ಕೆಪಿಸಿಸಿ ವಕ್ತಾರೆ ಕುಸುಮಾ ತಿಳಿಸಿದ್ದಾರೆ.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023 ರ ಸೆಪ್ಟಂಬರ್‌ನಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಮಂಡನೆಯಾಗಿ, ಒಮ್ಮತದಿಂದ ಅಂಗೀಕಾರವಾದ ಮಸೂದೆಯನ್ನು ಜಾರಿಗೆ ತರದೆ, ಐದು ರಾಜ್ಯಗಳ ಚುನಾವಣೆಯಲ್ಲಿ ಮತದಾರರ ಮುಂದೆ ಕಾಂಗ್ರೆಸ್ ಪಕ್ಷ ಮಹಿಳಾ ವಿರೋಧಿ ಎಂದು ಬಿಂಬಿಸುವ ಸಲುವಾಗಿ ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳು ಮಾಡಿದ ಕುತಂತ್ರವಾಗಿದೆ. ಈ ಸತ್ಯವನ್ನು ಜನರ ಮುಂದಿಡುವ ಸಲುವಾಗಿ ಕೆಪಿಸಿಸಿ ವತಿಯಿಂದ ಎಲ್ಲಾ ಜಿಲ್ಲೆಗಳಲ್ಲಿಯೂ ಮಾಧ್ಯಮಗಳು ಮತ್ತು ಜನರ ಮುಂದೆ ಇಂತಹ ಗೋಷ್ಠಿಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ಯುಪಿಎ ಸರ್ಕಾರ ಸಿದ್ಧಪಡಿಸಿದ ಮಹಿಳಾ ಬಿಲ್‌ನ್ನು ಅದೇ ಹೆಸರಿನಲ್ಲಿ 2023 ರಲ್ಲಿ ಮಂಡಿಸಿ, ಒಪ್ಪಿಗೆ ಪಡೆದು, 2026 ರ ಜನಗಣತಿ ನಂತರ ಕ್ಷೇತ್ರಗಳ ಪುನರ್‌ವಿಂಗಡನೆ ಮಾಡಿ, ನಂತರ ಜಾರಿಗೆ ತರುವ ಮಾತುಗಳನ್ನಾಡಿದ್ದ ಕೇಂದ್ರ ಸರ್ಕಾರ, ಐದು ರಾಜ್ಯಗಳ ಚುನಾವಣೆಯ ಸಂದರ್ಭದಲ್ಲಿ ಜನರ ಬಳಿ ಹೋಗಲು ಮುಖವಿಲ್ಲದೆ, ಮತ್ತೊಮ್ಮೆ ನಾರಿ ಶಕ್ತಿ ವಂದನ್ ಹೆಸರಿನಲ್ಲಿ ಮಹಿಳಾ ಮೀಸಲಾತಿ ಮಸೂದೆ ಮಂಡಿಸುವ ನಾಟಕವಾಡಿತು ಎಂದರು.

ನಿಜವಾದ ಮಹಿಳಾ ವಿರೋಧಿಗಳೆಂದರೆ ಅದು ಬಿಜೆಪಿ. ಮಹಿಳೆಯರ ಬಗ್ಗೆ ಅಷ್ಟು ಕಾಳಜಿ ಇದ್ದರೆ ಈಗಾಗಲೇ ಅನುಮೋದನೆ ಯಾಗಿರುವ ಬಿಲ್‌ನ ಪ್ರಕಾರ ಲೋಕಸಭೆ ಮತ್ತು ವಿಧಾನಸಭೆಯಲ್ಲಿ ಶೇ33 ರಷ್ಟು ಮಹಿಳಾ ಮೀಸಲಾತಿಯನ್ನು ಕೂಡಲೇ ಜಾರಿಗೆ ತರಲಿ ಎಂದು ಕುಸುಮ ಸವಾಲು ಹಾಕಿದರು.

ತುಮಕೂರು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಇಕ್ಬಾಲ್ ಅಹಮದ್ ಮಾತನಾಡಿ, ಕೇವಲ ಐದು ರಾಜ್ಯಗಳ ಚುನಾವಣೆಯಲ್ಲಿ ಮತಗಳಿಸುವ ಉದ್ದೇಶದಿಂದ ಈಗಾಗಲೇ ಎರಡು ಸದನಗಳಲ್ಲಿ ಅನುಮೋದನೆಗೊಂಡಿರುವ ಮಹಿಳಾ ಮೀಸಲು ಮಸೂದೆ ಪುನಃ ಮಂಡಿಸಿ, ಕಾಂಗ್ರೆಸ್ ಪಕ್ಷವನ್ನು ಮಹಿಳಾ ವಿರೋಧಿ ಎಂದು ಬಿಂಬಿಸಲು ಹೊರಟಿರುವ ಬಿಜೆಪಿ ಪಕ್ಷ ಮಹಿಳಾ ಸಬಲೀಕರಣಕ್ಕೆ ಬಿಜೆಪಿ ಕೊಡುಗೆ ಏನು ? ಎಂದು ಪ್ರಶ್ನಿಸಿದರು.

ಕೆಪಿಸಿಸಿ ಉಪಾಧ್ಯಕ್ಷ ಮುರುಳೀಧರ ಹಾಲಪ್ಪ ಮಾತನಾಡಿ, ಬಿಜೆಪಿ ಪಕ್ಷ ಒಂದು ಸುಳ್ಳನ್ನು ನೂರು ಬಾರಿ ಹೇಳಿ ಸತ್ಯವನ್ನಾಗಿಸಲು ಹೊರಟಿದೆ. ಇದನ್ನು ತಡೆಯುವ ನಿಟ್ಟಿನಲ್ಲಿ ಕೆಪಿಸಿಸಿ ವತಿಯಿಂದ ಪ್ರತಿ ಜಿಲ್ಲೆಯಲ್ಲಿಯೂ ಅಭಿಯಾನ ನಡೆಸಿ, ಜನರಿಗೆ ಸತ್ಯ ತಿಳಿಸುವ ಪ್ರಯತ್ನ ಮೊದಲ ಹಂತದಲ್ಲಿ ನಡೆಸಿದ್ದೇವೆ. ಎರಡನೇ ಹಂತದಲ್ಲಿ ಶಾಲಾ, ಕಾಲೇಜುಗಳಲ್ಲಿ ಯುವಜನರಿಗೆ ಮನವರಿಕೆ ಮಾಡಿಕೊಡಲು ಪ್ರಯತ್ನಿಸುವುದಾಗಿ ತಿಳಿಸಿದರು. ಕೆಪಿಸಿಸಿಯ ಡಾ.ವನಿತಾ, ಕೆಪಿಸಿಸಿ ಮತ್ತೊಬ್ಬ ಮುಖಂಡರಾದ ಶುಭ ಮಾತನಾಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುಜಾತ, ವಿಜಯಲಕ್ಷ್ಮಿ, ಎಸ್ಸಿ ಸೇಲ್‌ನ ಲಿಂಗರಾಜು, ಅಲ್ಪಸಂಖ್ಯಾತರ ಘಟಕದ ಇರ್ಫಾನ್ ಅಹಮದ್, ಮಂಜುನಾಥ್, ಶಿವಾಜಿ, ಸೇವಾದಳದ ಭೈಲಪ್ಪ, ಶಿವಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಕೆಪಿಸಿಸಿ ವಕ್ತಾರೆ ಕುಸುಮಾ ಮಾತನಾಡಿದರು.

ಸುದ್ದಿ ಸಿಂಚನ

ಪುರುಷ ರಾಜಕಾರಣಕ್ಕೆ ಹೆಣ್ಣು ದಾಳ: ಸಿದ್ದಲಿಂಗಪ್ಪ



ತುಮಕೂರು: ಹೆಣ್ಣಿಗೆ ಸ್ವತಂತ್ರವಾಗಿ ಆಲೋಚಿಸುವ ಶಕ್ತಿಯಿದ್ದರೂ ಪುರುಷ ರಾಜಕಾರಣಕ್ಕೆ ದಾಳವಾಗಿದ್ದಾಳೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಅಭಿಪ್ರಾಯಪಟ್ಟರು. ಅವರು ತುಮಕೂರಿನ ಝೆನ್ ಟೀಮ್, ಜಿಲ್ಲಾ ಕನ್ನಡ ಪರಿಷತ್ ಸಹಯೋಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ ಕನ್ನಡ ಭವನದಲ್ಲಿ ಆಯೋಜಿಸಿದ್ದ ಪಂಚವರ್ಣೆ ಏಕ ವ್ಯಕ್ತಿ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು. ಅಡುಗೆ ಮನೆಯಿಂದ ಅಂತರಿಕ್ಷದವರೆಗೂ ಆಕೆಯದ್ದು ದೃಢವಾದ ಹೆಜ್ಜೆಗಳಾದರೂ ಒಲೆಗಳು ಬದಲಾಗಿವೆಯೇ ಹೊರೆತು ಬಿಸಿ, ಶಾಖ, ಝಳ ಇತ್ಯಾದಿಗಳಲ್ಲಿ ಅಂತಹ ವ್ಯತ್ಯಾಸವಾಗಿಲ್ಲ. ಈಗಲೂ ಆಕೆ ಅತಂತ್ರಳೆ ಎಂದು ತಿಳಿಸಿದರು. ಡಾ. ಮೀರಾ ಎಚ್.ಎನ್. ಅವರು ಪಂಚವರ್ಣೆ ನಾಟಕದ ಮೂಲಕ ಮಹಾಭಾರತವನ್ನು ಮಹಿಳಾ ಭಾರತದ ಕಣ್ಣಿನಲ್ಲಿ ತೋರಿಸಿರುವುದು ಅತ್ಯಂತ ವಿಶಿಷ್ಟವಾದದ್ದು ಎಂದರು. ದ್ರೌಪದಿಯನ್ನು ರೂಪಕವಾಗಿಸಿ ಅವಳ ಅಂತರಂಗ, ವನವಾಸದ ಪಡಿಪಾಟಲು, ಅವಳ ಬದುಕು ಅವಳದಾಗದ, ಆಯ್ಕೆಗಳೇ ಇಲ್ಲದ ರಾಜಕುಮಾರಿಯ ಮನೋಕ ಲಾಪವನ್ನು ಮೀರಾ ಅವರು ಪಂಚವರ್ಣೆ ಏಕ ವ್ಯಕ್ತಿ ನಾಟಕದ ಮೂಲಕ ರಂಗದ ಮೇಲೆ ಅನಾವರಣ ಗೊಳಿಸಿದರು.ಡಾ. ಮೀರಾ ಅವರು ಮೂಲತಃ ತುಮಕೂರಿನವರು. ಯಯಾತಿ , ಮಡಿವಾಳ ಮಾಚಿದೇವ ಹೆಣದ ಬಟ್ಟೆ ನಾ ಕೊಂದ ಹುಡುಗಿ ಸೇರಿದಂತೆ ಹಲವಾರು ರಂಗ ಪ್ರಯೋಗಗಳಲ್ಲಿ ಅಭಿನಯಿಸಿರುವ ಇವರು 13 ವರ್ಷಗಳ ಕೂಚುಪುಡಿ ನೃತ್ಯಾಭ್ಯಾಸ ಮಾಡಿದ್ದಾರೆ ಎಂದ ಅವರು ಹಲವಾರು ಧಾರವಾಹಿಗಳಲ್ಲೂ ಅಭಿನಯಿಸಿದ್ದಾರೆ ಎಂದರು. ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪ್ರಾಚಾರ್ಯರಾದ ಪ್ರಭಾವತಿ ಅವರು ಮೀರಾ ಅವರು ಹಾವಾಭಾವ, ಅಭಿನಯ ಎಲ್ಲದರಲ್ಲೂ ವಿಶೇಷತೆ ಮೆರೆದಿದ್ದಾರೆ. ರಂಗ ಸ್ಥಳದಲ್ಲೇ ಒಬ್ಬರೇ ನಿಂತು ಒಂದು ಗಂಟೆಗಳ ಕಾಲ ದ್ರೌಪದಿಯ ಕಥೆಯನ್ನು ಅನಾವರಣೊಳಿಸಿದ್ದಾರೆ ಎಂದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್‌ಕು ಮಿರ್ಜಿ ಮಾತನಾಡಿ ತುಮಕೂರಿ ನಲ್ಲಿ ಸಾಕಷ್ಟು ರಂಗ ಪ್ರಯೋಗಗಳು ನಡೆಯುತ್ತಿವೆ. ಏಕ ವ್ಯಕ್ತಿ ಪ್ರದರ್ಶನಗಳು ಕೂಡ ಹೊಸತಲ್ಲ. ಆದರೆ ಹೊಸ ರೀತಿಯಲ್ಲಿ ರಂಗದ ಮೇಲೆ ತರುತ್ತಿರುವುದು ವಿಶೇಷವಾ ದದ್ದು ಎಂದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ, ಡಾ. ರವಿಕುಮಾರ್ ನೀಹಾ, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಹಾಗೂ ಝೆನ್ ಟೀಮ್ ನ ಉಗಮ ಶ್ರೀನಿವಾಸ್ ವೇದಿಕೆಯಲ್ಲಿದ್ದರು.

ರೈತರಿಗೆ ನೋಟಿಸ್ ಸರಿಯಲ್ಲ: ಶಾಂತಕುಮಾರ್

ತಿಪಟೂರು: ಕಳೆದ 55 ವರ್ಷಗಳ ಹಿಂದೆ ಸರ್ಕಾರದಿಂದ ಮಂಜೂರಾಗಿರುವ ಜಮೀನುಗಳನ್ನು ಅನುಭವಿಸಿ ಕೊಂಡು ಬದುಕು ಕಟ್ಟಿಕೊಂಡಿರುವ ಹಲವಾರು ರೈತರಿಗೆ ಅರಣ್ಯ ಇಲಾಖೆಯಿಂದ ಅವರ ಸ್ವಂತ ಜಮೀನುಗಳನ್ನು ತೆರವುಗೊಳಿಸಲು ಒತ್ತುವರಿ ತೆರವು ಮಾಡಿ ಎಂದು ನೋಟೀಸ್ ನೀಡಲಾಗುತ್ತಿರುವುದು ಒಳ್ಳೆಯದಲ್ಲ ಎಂದು ಜೆಡಿಎಸ್ ಮುಖಂಡ ಕೆ.ಟಿ.ಶಾಂತಕುಮಾರ್‌ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ತಮ್ಮ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ತಾಲೂಕಿನ ಚೌಡ್ಲಾಪುರ ಕಾವಲು, ಕಾಗೇಹಳ್ಳಿ ಕಾವಲು ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವಾಸಿಸುತ್ತಿರುವ ರೈತರುಗಳಿಗೆ 1971-72ರಲ್ಲಿ ಇಡುವಳಿ ರೂಪದಲ್ಲಿ ಸರ್ಕಾರದಿಂದ ನೀಡಲಾಗಿರುವ ಜಮೀನುಗಳಲ್ಲಿ ಕಳೆದ 60 ವರ್ಷಗಳಿಂದ ತಮ್ಮ ಜೀವನ ಕಟ್ಟಿಕೊಂಡಿದ್ದಾರೆ. ಅವರಿಗೆ ಮಂಜೂರಾಗಿರುವ ಭೂಮಿಯ ಎಲ್ಲ ದಾಖಲೆಗಳೂ ಅವರ ಬಳಿ ಇದ್ದು, ಆ ದಾಖಲೆಗಳ ಆಧಾರದ ಮೇಲೆ ಖಾತೆ, ಪಹಣಿ ಇದೆ. ಗಂಗಾ ಕಲ್ಯಾಣ ಸೇರಿದಂತೆ ದೊರೆಯುವ ಎಲ್ಲ ಸವಲತ್ತುಗಳನ್ನೂ ಅವರು ಪಡೆದುಕೊ ಂಡಿದ್ದಾರೆ. ಕೆಲವರು ಬ್ಯಾಂಕ್ ಲೋನ್ ಕೂಡ ಪಡೆದುಕೊಂಡಿದ್ದಾರೆ. ಅವರ ಹೆಸರಲ್ಲಿ ದಾಖಲೆಗಳು ಇರದಿದ್ದರೆ ಈ ಎಲ್ಲಾ ಸೌಲಭ್ಯ ಸವಲತ್ತುಗಳನ್ನು ಅವರು ಪಡೆದುಕೊಳ್ಳಲು ಆಗುತ್ತಿರಲಿಲ್ಲ. ಅರಣ್ಯ ಇಲಾಖೆ ಇಂತಹ ರೈತರನ್ನು ಒಕ್ಕಲೆಬ್ಬಿಸಲು ಮುಂದಾಗಿರುವುದು ಅಕ್ಷಮ್ಯ ಎಂದರು.ಇಲ್ಲಿ ರೈತರು ಒತ್ತುವರಿ ಮಾಡಿಕೊಂಡಿದ್ದರೆ ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಲಿ. ಆದರೆ ಅವರ ಹೆಸರಿನಲ್ಲಿರುವ ಜಮೀನಿನಿಂದಲೇ ಅವರನ್ನು ತೆರವುಗೊಳಿಸುವುದನ್ನು ನಾವು ವಿರೋಧಿಸುತ್ತೇವೆ. ಅರಣ್ಯ ಇಲಾಖೆಯ ಹೆಸರಿನಲ್ಲಿ ಈ ಜಮೀನುಗಳಿದ್ದರೆ ಸೂಕ್ತ ದಾಖಲೆ ನೀಡಲಿ. ಆದರೆ ಈ ಭಾಗದ ರೈತರಿಗೆ ಈಗಾಗಲೇ ಮೂರು ಬಾರಿ ನೋಟೀಸ್ ನೀಡಲಾಗಿದ್ದು ಅವರನ್ನು ವೃಥಾ ಕಚೇರಿಗೆ ಅಲೆದಾಡುವಂತೆ ಮಾಡಲಾಗುತ್ತಿದೆ ಎಂದು ಆಪಾದಿಸಿದರು.ಈ ಕೂಡಲೇ ರೈತರನ್ನು ಅವರ ಜಮೀನಿನಿಂದಲೇ ತೆರವುಗೊಳಿಸುವ ಪ್ರಕ್ರಿಯೆ ನಿಲ್ಲಿಸಬೇಕು. ಇಲ್ಲವಾದಲ್ಲಿ ಅವರ ಪರವಾಗಿ ರೈತರಿಗೆ ನ್ಯಾಯ ದೊರಕಿಸಿಕೊಡುವ ಸಲುವಾಗಿ ಹೋರಾಟ ಮಾಡುವುದಾಗಿ ತಿಳಿಸಿದರು.

ಭ್ರಷ್ಟಾಚಾರ, ತುಷ್ಟೀಕರಣ ರಾಜಕಾರಣಕ್ಕೆ ತಕ್ಕ ಪಾಠ

ಮೂರು ರಾಜ್ಯಗಳ ಚುನಾವಣೆ ಗೆಲುವು: ವಿಜಯೋತ್ಸವದಲ್ಲಿ ಶಾಸಕರಾದ ಸುರೇಶ್ ಗೌಡ, ಜ್ಯೋತಿ ಗಣೇಶ್ ಭಾಗಿ



ಪಶ್ಚಿಮ ಬಂಗಾಳ ಸೇರಿದಂತೆ ಮೂರು ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದಕ್ಕೆ ಜಿಲ್ಲಾ ಬಿಜೆಪಿ ಸೋಮವಾರ ನಗರದಲ್ಲಿ ವಿಜಯೋತ್ಸವ ಆಚರಿಸಲಾಯಿತು.

• **ಕನ್ನಡಪ್ರಭ ವಾರ್ತೆ** ತುಮಕೂರು

ಪಶ್ಚಿಮ ಬಂಗಾಳ ಸೇರಿದಂತೆ ಮೂರು ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದಕ್ಕೆ ಜಿಲ್ಲಾ ಬಿಜೆಪಿ ಸೋಮವಾರ ನಗರದಲ್ಲಿ ವಿಜಯೋತ್ಸವ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ಶಾಸಕ ಬಿ. ಸುರೇಶ್ ಗೌಡರು, ಭ್ರಷ್ಟಾಚಾರ, ತುಷ್ಟೀಕರಣ ರಾಜಕಾರಣಕ್ಕೆ ಆಯಾ ರಾಜ್ಯದ ಜನ ತಕ್ಕ ಪಾಠ ಕಲಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಗೆಲುವು ಎಂದೂ ಸಾಧ್ಯವಿಲ್ಲ ಎಂಬ ಪ್ರತೀತಿಯನ್ನು ಈ ಸಾರಿ ಅಲ್ಲಿನ ಜನರು ಸುಳ್ಳು ಮಾಡಿದ್ದು ಅಲ್ಲಿ ಬಿಜೆಪಿ ಜಯಭೇರಿ ಬಾರಿಸಿರುವುದು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಅಭಿವೃದ್ಧಿ ಪರ ರಾಜಕಾರಣಕ್ಕೆ ಸಂದ ದೊಡ್ಡ ಗೆಲುವಾಗಿದೆ. ಬಾಂಗ್ಲಾದಲ್ಲಿ ಜನಿಸಿದ ಜನಸಂಘ ಸ್ಥಾಪಕ ಶಾಮ್‌ಪ್ರಕಾಶ್‌ಮುಖರ್ಜಿಯವರಿಗೆ ಈ ಚುನಾವಣೆ ಗೆಲುವನ್ನು ಅರ್ಪಿಸುತ್ತೇವೆ ಎಂದು ಹೇಳಿದರು.

ಕಳೆದ 15 ವರ್ಷಗಳಿಂದ ಅಧಿಕಾರದಲ್ಲಿ ಇದ್ದ ಅವರು ಶತಾಯ ಗತಾಯ ಮತ್ತೆ ಅಧಿಕಾರಕ್ಕೆ ಬರಲು ಎಲ್ಲ ಪ್ರಯತ್ನ ಮಾಡುತ್ತಿದ್ದರು. ಆದರೆ, ಜನರು ಅವರ ವಿರುದ್ಧ ತೀವ್ರವಾಗಿ ಬಂಡೆದ್ದುದಕ್ಕೆ ಈಗ ಬಂದಿರುವ ಫಲಿತಾಂಶವೇ ನಿದರ್ಶನ. ಬಾಂಗ್ಲಾದಿಂದ ಬಂದ ನುಸುಳುಕೋರರನ್ನು ಓಲೈಸಿಕೊಂಡು ಅವರು ಇದುವರೆಗೆ ಚುನಾವಣೆ ಗೆಲ್ಲುತ್ತಿದ್ದರು. ಅದು ಭಾರತದಲ್ಲಿಯೇ ವಾಸವಾಗಿದ್ದ ಹಿಂದೂಗಳನ್ನು ಕಡೆಗಣಿಸಿದ್ದರ ಪರಿಣಾಮವೇ ಈ ಫಲಿತಾಂಶ ಎಂದರು.

ರಾಜ್ಯದಲ್ಲಿಯೂ ಸಿಎಂ ಸಿದ್ದರಾಮಯ್ಯ ಕೂಡ ಮುಸ್ಲಿಂ ತುಷ್ಟಿಕರಣದ ರಾಜಕಾರಣದಲ್ಲಿ ತೊಡಗಿದ್ದಾರೆ. ಪಶ್ಚಿಮ ಬಂಗಾಲದ ಚುನಾವಣೆ ಫಲಿತಾಂಶ ಅವರಿಗೂ ಒಂದು ಎಚ್ಚರಿಕೆಯ ಗಂಟೆ. ತಮಿಳುನಾಡಿನ ಸಿಎಂ ಸ್ಟಾಲಿನ್ ಮತ್ತು ಅವರ ಪುತ್ರ ಉದಯನಿಧಿ ಮಾರನ್ ಹಿಂದೂ ಅಸ್ಮಿತೆಯ ವಿರುದ್ಧ ಇದ್ದರು. ಸನಾತನ ಧರ್ಮದ ವಿರುದ್ಧ ಅವರು ಮಾಡಿದ ದುರುದ್ದೇಶದ ಟೀಕೆಗಳನ್ನು ಜನರು ಮರೆತಿಲ್ಲ. ಅದಕ್ಕಾಗಿಯೇ ಅಲ್ಲಿ ಡಿಎಂಕೆ ಪಕ್ಷವನ್ನು ಜನರು ಮನೆಗೆ ಕಳಿಸಿದ್ದಾರೆ ಎಂದು ಸುರೇಶ್‌ಗೌಡ ಹೇಳಿದರು.

ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ಬಿಜೆಪಿ ಸಂಸ್ಥಾಪಕ ಶ್ಯಾಮ್ ಪ್ರಸಾದ್ ಮುಖರ್ಜಿಯವರು ಜನಿಸಿದ ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿಯವರ ದುಷ್ಟ ಸರ್ಕಾರದ ವಿರುದ್ಧ ಅಲ್ಲಿನ ಜನ ಸೆಟೆದುನಿಂತು ಆ ಸರ್ಕಾರವನ್ನು ಕೊನೆಗಾಣಿಸಿದ್ದಾರೆ. ದೇಶ ವಿರೋಧಿಗಳಿಗೆ ಆಧಾರ್ ಕಾರ್ಡ್, ಎಲೆಕ್ಷನ್ ಐಡಿ ಕೊಟ್ಟು ಪೋಷಿಸಿ ದೇಶದ ಭದ್ರತೆಯ ಸಮಸ್ಯೆಗೆ ಕಾರಣವಾಗಿದ್ದ ಮಮತಾ ಬ್ಯಾನರ್ಜಿ ಸರ್ಕಾರದ ವಿರುದ್ಧ ನರೇಂದ್ರ ಮೋದಿ ಹಾಗೂ ಅಮಿತ್ ಷಾ ಅವರು ತೆಗದುಕೊಂಡು ದಿಟ್ಟ ಕ್ರಮವನ್ನು ಅಲ್ಲಿನ ಜನ ಬೆಂಬಲಿಸಿದ್ದಾರೆ ಎಂದು ಹೇಳಿದರು.

ಬಾಂಗ್ಲಾದ ದುರಾಡಳಿತದ ವಿರುದ್ಧ ರೊಚ್ಚಿಗೆದ್ದ ಅಲ್ಲಿನ ಮತದಾರರು ಮಮತಾ ಬ್ಯಾನರ್ಜಿ ಸರ್ಕಾರಕ್ಕೆ ತಕ್ಕ ಪಾಠ ಕಲಿಸಿದ್ದಾರೆ. ಅಲ್ಲಿನ ಮತದಾರರು, ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತರಿಗೆ ಈ ವಿಜಯವನ್ನು ಮುಡುಪಾಗಿಡಬೇಕು. ನಮ್ಮ ರಾಜ್ಯದಲ್ಲಿಯೂ ಮುಂದಿನ ದಿನಗಳಲ್ಲಿ ಇದೇ ಫಲಿತಾಂಶ ನಿರೀಕ್ಷಿಸಬಹುದಾಗಿದೆ ಎಂದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ ಮಾತನಾಡಿ, ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿ ರಾಜ್ಯದಲ್ಲಿ ಬಿಜೆಪಿ ನೇತೃತ್ವಕ್ಕೆ ಭರ್ಜರಿ ಗೆಲುವು ಸಿಕ್ಕಿದೆ. ಓಲೈಕೆ ರಾಜಕಾರಣಕ್ಕೆ ಬೆಲೆ ಇಲ್ಲ, ಅಭಿವೃದ್ಧಿಗೆ ಮಾತ್ರ ಬೆಲೆ ಎಂಬುದು ಈ ಚುನಾವಣೆಯಿಂದ ಸಾಬೀತಾಗಿದೆ. ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ಚುನಾವಣೆ ಮೂರು ತಿಂಗಳ ಮೊದಲೇ ಮಹಿಳೆಯರ ಬ್ಯಾಂಕ್ ಖಾತೆಗೆ ಹಣ ಜಮಾ ಮಾಡಿದ್ದರು. ಅವರ ಪಕ್ಷವನ್ನು ಅಲ್ಲಿನ ಮತದಾರರು ಆಮಿಷದ ಸರ್ಕಾರವನ್ನು ನಂಬಿಲ್ಲ. ಇದೇ ನೀತಿ ಅನುಸರಿಸಿಕೊಂಡು ಬರುತ್ತಿರುವ ಇಲ್ಲಿನ ಕಾಂಗ್ರೆಸ್ ಸರ್ಕಾರವನ್ನೂ ಜನ ಮನೆಗೆ ಕಳಿಸುತ್ತಾರೆ ಎಂದರು.

ಮುಖಂಡ ಎಸ್.ಪಿ. ಚಿದಾನಂದ್, ಜಿಲ್ಲಾ ಬಿಜೆಪಿ ಪ್ರಧಾನಕಾರ್ಯದರ್ಶಿ ಟಿ.ಎಚ್.ಹನುಮಂತರಾಜು, ಮುಖಂಡರಾದ ಎಚ್.ಎಂ.ರವೀಶಯ್ಯ, ಬಾವಿಕಟ್ಟೆ ನಾಗಣ್ಣ, ಮಲ್ಲಿಕಾರ್ಜುನ್, ಸತ್ಯಮಂಗಲ ಜಗದೀಶ್, ವಿರೂಪಾಕ್ಷಪ್ಪ, ಜ್ಯೋತಿ ತಿಪ್ಪೇಸ್ವಾಮಿ, ವಸಂತಮ್ಮ, ಗಣೇಶ್‌ಪ್ರಸಾದ್, ಹನುಮಂತರಾಜು, ಪ್ರೀತಂ ಜೈನ್, ಗಂಗಾಧರ್, ಕೊಪ್ಪಲ್ ನಾಗರಾಜು ಮತ್ತಿತರು ಭಾಗವಹಿಸಿದ್ದರು.

ಪಶ್ಚಿಮ ಬಂಗಾಲದಲ್ಲಿ ಹಿಂದೂಗಳ ರಕ್ಷಣೆ

ಬಿಜೆಪಿ ವಿಜಯೋತ್ಸವದಲ್ಲಿ ಮಾಜಿ ಶಾಸಕ ಮಸಾಲಾ ಜಯರಾಮ್

• **ಕನ್ನಡಪ್ರಭ ವಾರ್ತೆ** ತುರುವೇಕೆರೆ

ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ನ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅದ್ವಿತೀಯ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದದರು.

ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ನ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಮಾಜಿ ಶಾಸಕ ಮಸಾಲಾ ಜಯರಾಮ್ ಮತ್ತು ತಾಲೂಕು ಘಟಕದ ಅಧ್ಯಕ್ಷ ಪ್ರಕಾಶ್ ರವರ ನೇತೃತ್ವದಲ್ಲಿ ಮಸಾಲಾ ಜಯರಾಮ್ ರವರ ಫಾರಂ ಹೌಸ್ ನಲ್ಲಿ ಬಿಜೆಪಿ ಕಾರ್ಯಕರ್ತರು ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಮಸಾಲಾ ಜಯರಾಮ್ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಮತ್ತು ಅಮಿತ್ ಷಾ ರವರ ಚಾಣಕ್ಯ ತಂತ್ರ ಎಲ್ಲೆಡೆ ಕಾರ್ಯ ಸಾಧಿಸಿದೆ. ಸ್ವಾತಂತ್ರ್ಯ ಬಂದ ದಿನದಿಂದಲೂ ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಬಾವುಟ ಅರಳಿರಲಿಲ್ಲ.

ಅಂದಿನಿಂದ ಒಂದೊಂದು ಹೆಜ್ಜೆ ಹಾಕಿ ಮುನ್ನೆಡೆದ ಬಿಜೆಪಿ ಇಂದು ರಾಜ್ಯವನ್ನು ಆಳುವ ಹಂತ ತಲುಪಿದೆ. ಕಾಂಗ್ರೆಸ್ ಗೆ ಭವಿಷ್ಯವಿಲ್ಲ ಎಂದು ಮತ್ತೊಮ್ಮೆ ಸಾಬೀತಾಗಿದೆ. ಬಂಗಾಳದಲ್ಲಿ ರಾಮರಾಜ್ಯ ಸ್ಥಾಪನೆಯಾಗಲಿದೆ. ಬಾಂಗ್ಲಾದವರಿಂದ ಹಿಂದೂಗಳ ರಕ್ಷಣೆ ಆಗಲಿದೆ ಎಂಬ ಆಶಾಭಾವನೆಯನ್ನು ಮಸಾಲಾ ಜಯರಾಮ್ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿಯ ಹಿರಿಯ ಮುಖಂಡರಾದ ಅರಳೀಕೆರೆ ಶಿವಯ್ಯ, ಕೊಂಡಜ್ಜಿ ವಿಶ್ವನಾಥ್, ಹರಿಕಾರನಹಳ್ಳಿ ಪ್ರಸಾದ್, ಸಿದ್ದಪ್ಪಾಜಿ, ಮಹಿಳಾ ಮುಖಂಡರಾದ ಅನಿತಾ ನಂಜುಂಡಸ್ವಾಮಿ, ಆಶಾರಾಜಶೇಖರ್, ರಾಧಾ, ಶೋಭಾ, ಸಾವಿತ್ರಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.



ತುರುವೇಕೆರೆಯ ಮಾಜಿ ಶಾಸಕ ಮಸಾಲಾ ಜಯರಾಮ್ ರವರ ಫಾರಂ ಹೌಸ್ ನಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಮುಂದಿನ ಬಾರಿ ರಾಜ್ಯದಲ್ಲಿಯೂ ಬಿಜೆಪಿ ಸರ್ಕಾರ

ಬಿಜೆಪಿ ಮಂಡಲದಿಂದ ವಿಜಯೋತ್ಸವ ಆಚರಣೆಯಲ್ಲಿ ಮುಖಂಡ ಅನಿಲ್ ಕುಮಾರ್

• **ಕನ್ನಡಪ್ರಭ ವಾರ್ತೆ** ಕೊರಟಗೆರೆ



ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಆಡಳಿತಕ್ಕೆ ದೇಶದ ಇತರೇ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಸಾಧ್ಯವಾಗುತ್ತಿದೆ. ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿಯೂ ಬಿಜೆಪಿ ಸರ್ಕಾರ ರಚನೆ ಮಾಡುವುದ ಶತಸಿದ್ದ ಎಂದು ಮಾಜಿ ಐಎಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಬಿ.ಎಚ್.ಅನಿಲ್‌ಕುಮಾರ್ ತಿಳಿಸಿದರು.

ಪಟ್ಟಣದ ಮುಖ್ಯ ಬಸ್‌ನಿಲ್ದಾಣದಲ್ಲಿ ತಾಲೂಕು ಬಿಜೆಪಿ ಮಂಡಲ ಆಯೋಜನೆ ಮಾಡಲಾಗಿದ್ದ ಪಂಚರಾಜ್ಯಗಳ ಚುನಾವಣೆಯಲ್ಲಿ ಮೂರು ರಾಜ್ಯದಲ್ಲಿ ಬಿಜೆಪಿ ಜಯಗಳಿಸಿ ಹಿನ್ನೆಲೆಯಲ್ಲಿ ವಿಜಯೋತ್ಸವದಲ್ಲಿ ಭಾಗವಹಿಸಿ ಮಾತನಾಡಿದರು.

30 ವರ್ಷಗಳಿಂದ ಭದ್ರ ಕೋಟೆಯಾಗಿದ್ದ ಪಶ್ಚಿಮ ಬಂಗಾಳದಲ್ಲಿ ಇಂದು ನಡೆದ ಮತ ಏಣಿಕೆಯಲ್ಲಿ 198 ಕ್ಕೂ ಅಧಿಕ ನಮ್ಮ ಅಭ್ಯರ್ಥಿಗಳ ಜಯಶೀಲರಾಗಿದ್ದಾರೆ. ಪುದುಚೇರಿ , ಅಸ್ಸಾಂ ನಲ್ಲಿ ಕೂಡ ಈ ಬಾರಿ ನಮ್ಮ ಬಿಜೆಪಿ ಅಭ್ಯರ್ಥಿಗಳು ಜಯಗಳಿಸಿದ್ದು ನಮ್ಮ ಸರ್ಕಾರ ರಚನೆಯಾಗಲಿದೆ. ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿರುವ ಕಾಂಗ್ರೆಸ್‌ಸರ್ಕಾರದ ದುರಾಡಳಿತಕ್ಕೆ ಜನ ತಕ್ಕ ಪಾಠ ಕಲಿಸಿ ಮತ್ತೆ ಇಲ್ಲಿ ಬಿಜೆಪಿ ಸರ್ಕಾರ ರಚನೆ ಮಾಡೋದು ಶತಸಿದ್ದ ಎಂದು ಭವಿಷ್ಯ ನುಡಿದರು.

ಮಂಡಲದ ತಾಲೂಕು ಅಧ್ಯಕ್ಷ ರುದ್ರೇಶ್ ಮಾತನಾಡಿ ಪಂಚ ರಾಜ್ಯದ ಚುನಾವಣೆಯಲ್ಲಿ 3 ರಾಜ್ಯದಲ್ಲಿ ನಮ್ಮ ಬಿಜೆಪಿ ಸರ್ಕಾರ ರಚನೆಯಾಗಲಿದ್ದು, ದೇಶದಲ್ಲಿ ಈಗಾಗಲೇ 19 ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದ್ದು ಅದರ ಮುಂದುವರೆದ ಭಾಗವಾಗಿ ದಕ್ಷಿಣ ಭಾರತದಲ್ಲಿ ತನ್ನ ಪ್ರಾಬಲ್ಯವನ್ನ ಹೆಚ್ಚಿಕೊಳ್ಳುತ್ತಿದೆ ಎಂದು ತಿಳಿದರು.

ನಿಕಟ ಪೂರ್ವ ಅಧ್ಯಕ್ಷ ಡಾ.ಕೆ.ಎಲ್.ದರ್ಶನ್ ಮಾತನಾಡಿ, ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಆಡಳಿಯ ಹಾಗೂ ಕಾರ್ಯವೈಕರಿಗೆ ರಾಜ್ಯದಿಂದ ರಾಜ್ಯಕ್ಕೆ ಬಿಜೆಪಿ ಪರ ಮತಗಳ ಹೆಚ್ಚಳವಾಗುತ್ತಿರುವ ಹಿನ್ನಲೆಯಲ್ಲಿ ಬಿಜೆಪಿ ಗೆಲ್ಲುವುದಿಲ್ಲ ಎನ್ನುವ ಕ್ಷೇತ್ರದಲ್ಲಿ ಗಲುವು ಸಾಧಿಸಿ ಬಿಜೆಪಿ ಅಧಿಕಾರಕ್ಕೆ ಬರುತ್ತಿದ್ದು, ಪಂಚರಾಜ್ಯಗಳಲ್ಲಿ ಬಿಜೆಪಿ ಪಕ್ಷಕ್ಕೆ ಮತ ನೀಡಿದ ಎಲ್ಲರಗೂ ಧನ್ಯವಾದವನ್ನ ತಿಳಿಸಿದರು.

ಸಂಭ್ರಮಾಚರಣೆಯಲ್ಲಿ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ದಾಸಲುಕುಂಟೆ ರಾಘು ಮುಖಂಡರಾದ ಸ್ವಾಮಿ, ಗೋವಿಂದರಾಜು. ಮಂಜುನಾಥ್, ಪ್ರದೀಪ್, ರೂಪಶ್ರೀ, ದಯಾಮಣಿ, ರಂಗರಾಜು, ಮೂರ್ತಿ, ಚೇತನ್, ಅರಣ್, ದಯಾನಂದ್, ಆನಂದ್, ರಂಜಿತ್, ನಟರಾಜ್, ನಂಜುಡಪ್ಪ, ರಡ್ಡಿ ಸೇರಿದಂತೆ ಇತರರು ಇದ್ದರು.

ಮೋದಿ ಆಡಳಿತ ದೇಶವೇ ಒಪ್ಪಿದಂತಾಗಿದೆ

ತಾಲೂಕು ಬಿಜೆಪಿ ಅಧ್ಯಕ್ಷ ಬಲರಾಮಯ್ಯ | ಗುಬ್ಬಿಯಲ್ಲಿ ಬಿಜೆಪಿಯಿಂದ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮ

• **ಕನ್ನಡಪ್ರಭ ವಾರ್ತೆ** ಗುಬ್ಬಿ



ನರೇಂದ್ರ ಮೋದಿ ಅವರ ಆಡಳಿತವನ್ನು ಮೆಚ್ಚಿರುವಂತಹ ಇಡೀ ದೇಶವು ಪಂಚ ರಾಜ್ಯ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚರಿಯನ್ನು ಬಿಜೆಪಿ ಗೆಲ್ಲುವ ಮೂಲಕ ನರೇಂದ್ರ ಮೋದಿ ಅವರ ಆಡಳಿತವನ್ನು ಇಡೀ ದೇಶವೇ ಒಪ್ಪಿದೆ ಎಂಬುದು ಸಾಬೀತಾಗಿದೆ ಎಂದು ತಾಲೂಕು ಬಿಜೆಪಿ ಅಧ್ಯಕ್ಷ ಬಲರಾಮಯ್ಯ ಹೇಳಿದರು.

ಮೂರು ರಾಜ್ಯಗಳಲ್ಲಿ ಬಿಜೆಪಿ ಜಯಗಳಿಸಿ ಹಿನ್ನೆಲೆಯಲ್ಲಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಿ ಮಾತನಾಡಿದರು. ಬಿಜೆಪಿ ಸರ್ಕಾರವನ್ನ ಮತ್ತಷ್ಟು ಗಟ್ಟಿಗೊಳಿಸಿದಂತಹ ರಾಜ್ಯದ ಎಲ್ಲಾ ಮತಬಾಂಧವರಿಗೆ ಕಾರ್ಯಕರ್ತರಿಗೆ ಧನ್ಯವಾದಗಳು ನನ್ನ ತಿಳಿಸಿದರು.

ಮುಖಂಡ ಎಸ್ ಡಿ ದಿಲೀಪ್ ಕುಮಾರ್ ಮಾತನಾಡಿ, ಎರಡು ದಶಕಗಳಿಂದ ಆಡಳಿತ ಮಾಡುತ್ತಿದ್ದಂತಹ ವಿರೋಧ ಪಕ್ಷವನ್ನು ಮಣಿಸಿ ಪಶ್ಚಿಮ ಬಂಗಾಳವನ್ನು ಗೆಲ್ಲುವ ಮೂಲಕ ಹೊಸ ಇತಿಹಾಸವನ್ನು ಬಿಜೆಪಿ ಬರೆದಿದೆ ನರೇಂದ್ರ ಮೋದಿಯವರು ಮಾಡಿರುವಂತಹ ಅಭಿವೃದ್ಧಿಯ ಕೆಲಸಗಳೇ ಶ್ರೀರಕ್ಷೆಯಾಗಿದೆ ಎಂಬುದಕ್ಕೆ ಇದು ಉದಾಹರಣೆಯಾಗಿದ್ದು , ಕರ್ನಾಟಕದಲ್ಲಿ ಈಗ ಚುನಾವಣೆ ನಡೆದರೂ ಬಿಜೆಪಿ ಗೆಲ್ಲುವುದರಲ್ಲಿ ಸಂಶಯವೇ ಇಲ್ಲ ಎಂದು ತಿಳಿಸಿದರು.

ಮುಖಂಡ ಚಂದ್ರಶೇಖರಬಾಬು ಮಾತನಾಡಿ, ಬಿಜೆಪಿಯ ಗೆಲುವು ದೇಶದ ಗೆಲುವಾಗಿದ್ದು ರಾಜ್ಯದ ದಾವಣಗೆರೆ ಹಾಗೂ ಬಾಗಲಕೋಟೆ ಕ್ಷೇತ್ರಗಳನ್ನು ಅಲ್ಪಂತರದಲ್ಲಿ ಸೋತಿದ್ದೇವೆ ಬಿಟ್ಟರೆ ಅಲ್ಲಿಯೂ ಸಹ ಮತದಾರರು ಕಾರ್ಯಕರ್ತರು ಪಕ್ಷವನ್ನು ಕೈಹಿಡಿದಿದ್ದಾರೆ. ನರೇಂದ್ರ ಮೋದಿ ಅವರ ಆಡಳಿತ ಇಡೀ ದೇಶವೇ ಮತ್ತೊಮ್ಮೆ ಮೆಚ್ಚಿರುವುದು ನಿಜವಾಗಿಯೂ ಖುಷಿ ಕೊಟ್ಟಿದೆ ಎಂದು ತಿಳಿಸಿದರು.

ಜಿಲ್ಲಾ ಉಪಾಧ್ಯಕ್ಷ ಭೈರಪ್ಪ ಮಾತನಾಡಿ ಯಾವ ರಾಜ್ಯಗಳಲ್ಲಿ ಹಿಂದುತ್ವವನ್ನು ಹಿಂದೆ ಇಡಲು ಹೋಗಿದ್ದರೋ ಅಂತಹ ರಾಜ್ಯಗಳು ಭಾರತ ದೇಶ ಹಿಂದುತ್ವದ ದೇಶ ಎಂಬುದನ್ನು ಸಾರಿದೆ. ಇನ್ನು ಮುಂದಿನ ದಿನದಲ್ಲಿ ಭಾರತದ ಎಲ್ಲಾ ರಾಜ್ಯಗಳಲ್ಲೂ ಬಿಜೆಪಿಯ ಬಾವುಟ ಹಾರುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ನಂಜೇಗೌಡ, ಜಿಲ್ಲಾ ಉಪಾಧ್ಯಕ್ಷ ಪಂಚಾಕ್ಷರಿ, ಚೇತನ್ ನಾಯಕ್, ಬಸವರಾಜು, ಕೃಷ್ಣಮೂರ್ತಿ ಬಿಎಸ್‌ಎನ್‌ಎಲ್, ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ಕೃಷ್ಣಮೂರ್ತಿ, ರೇಣುಕ ಲೋಕೇಶ್, ಪ್ರಸಾದ್, ಪ್ರಮೋದ್, ಕವಿತಾ, ಸೇರಿದಂತೆ ಇನ್ನಿತರರು ಹಾಜರಿದ್ದರು.

ಉಪ ಚುನಾವಣೆ: ಕಾಂಗ್ರೆಸ್‌ನಿಂದಲೂ ವಿಜಯೋತ್ಸವ

ತುರುವೇಕೆರೆ: ದಾವಣಗೆರೆ ಮತ್ತು ಬಾಗಲಕೋಟೆಯ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಲ್ಲಿಯ ಮಿನಿ ವಿಧಾನ ಸೌಧದ ಮುಂಭಾಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ದೇವರಾಜು ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಿಸಿದರು. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಡಾ.ಜಿ.ಪರಮೇಶ್ವರ್‌ರವರಿಗೆ ಜಯಕಾರ ಹಾಕಿದರು.

ಈ ವೇಳೆ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ದೇವರಾಜು, ಕಾಂಗ್ರೆಸ್ ಪಕ್ಷದ ನೇತೃತ್ವದ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಿ ಬಡಜನರ ಪಾಲಿಗೆ ಕಲ್ಪವೃಕ್ಷವಾಗಿದೆ. ಅಲ್ಲದೇ ಅಭಿವೃದ್ಧಿ ಕಾರ್ಯಗಳನ್ನೂ ಸಹ ಮಾಡುತ್ತಿದೆ ಎನ್ನುವುದಕ್ಕೆ ಬಾಗಲಕೋಟೆ ಮತ್ತು ದಾವಣಗೆರೆಯ ಚುನಾವಣೆಯ ಫಲಿತಾಂಶವೇ ಸಾಕ್ಷಿ ಎಂದು ಹೇಳಿದರು.

ಈ ವೇಳೆ ಕಾಂಗ್ರೆಸ್ ಸೇವಾದಳದ ಅಧ್ಯಕ್ಷ ಕೊಂಡಜ್ಜಿ ಕುಮಾರ್, ಮುಖಂಡರಾದ ನಂಜುಂಡಪ್ಪ, ಪ್ರಕಾಶ್, ನಂಜೇಗೌಡ, ಚಿಕ್ಕೇಗೌಡ, ರೇವಣ್ಣ, ಚಂದ್ರು, ಜಾಫರ್, ನಾಗಲಾಪುರ ಜಗದೀಶ್, ಎಸ್ ಸಿ, ಎಸ್ಟಿ ಘಟಕದ ಮುಖಂಡ ಜೋಗಿ ಶಿವರಾಜು, ಮುನಿಯೂರು ಗಿರೀಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.



ತುರುವೇಕೆರೆಯ ಮಿನಿ ವಿಧಾನಸೌಧದ ಮುಂದೆ ಕಾಂಗ್ರೆಸ್ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಗುರುವಂದನಾ ಕಾರ್ಯಕ್ರಮ | ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಪ್ರಸನ್ನನಾಥ ಸ್ವಾಮೀಜಿ ಅಭಿಮತ

ಶಿಷ್ಯರು ಸತ್ಪ್ರಜೆಯಾಗಲಿ ಎಂದು ಶಿಕ್ಷೆ ನೀಡುವ ಗುರುವಿಗೆ ನಮಿಸಿ

• **ಕನ್ನಡಪ್ರಭ ವಾರ್ತೆ** ತುರುವೇಕೆರೆ



ಗುರು ತನ್ನ ಶಿಷ್ಯ ತನಗಿಂತ ಎತ್ತರಕ್ಕೆ ಬೆಳೆಯಬೇಕು. ಆತ ದೇಶದ ಸತ್ಪ್ರಜೆ ಆಗಬೇಕೆಂಬ ಹಂಬಲದಿಂದ ತನ್ನ ಶಿಷ್ಯರಿಗೆ ಶಿಕ್ಷಿಸುತ್ತಾನೆ ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪ್ರಸನ್ನನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲೂಕಿನ ಮಾಯಸಂದ್ರ ಟಿ.ಬಿ.ಕ್ರಾಸ್ ನಲ್ಲಿರುವ ನೆಹರು ವಿದ್ಯಾ ಶಾಲಾ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ 2004 05 ನೇ ಸಾಲಿನ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳು ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮ ಮತ್ತು ಸೋದರ ಬಳಗದ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ತಮ್ಮ ಮಕ್ಕಳ ಭವಿಷ್ಯ ಉಜ್ವಲವಾಗಬೇಕೆಂದು ಹೇಗೆ ತಂದೆ ತಾಯಿಯರು ಭಾವಿಸುವರೋ, ಹಾಗೆಯೇ ಗುರುವೂ ಸಹ ತನ್ನ ವಿದ್ಯಾರ್ಥಿ ತನಗಿಂತಲೂ ಮಿಗಿಲಾಗಿ ಆಕಾಶದೆತ್ತರಕ್ಕೆ ಬೆಳೆಯಬೇಕೆಂದು ಆಪೇಕ್ಷಿಸುತ್ತಾರೆ. ಅವರಲ್ಲಿ ಯಾವುದೇ ಸ್ವಾರ್ಥವಿರುವುದಿಲ್ಲ. ಎಲ್ಲ ವೃತ್ತಿಗಳಿಗಿಂತ ಮಿಗಿಲಾದ ವೃತ್ತಿ ಶಿಕ್ಷಕ ವೃತ್ತಿ. ಅದೊಂದು ಪವಿತ್ರವಾದ ಹುದ್ದೆ. ತನ್ನ ಶಿಷ್ಯ ಎಷ್ಟೇ ಎತ್ತರಕ್ಕೆ ಏರಿದರೂ ಸಹ ಆತ ತನಗೆ ಪಾಠ ಕಲಿಸಿದ ಗುರುಗಳು ಸಿಕ್ಕ ಕೂಡಲೇ ಗೌರವ ನೀಡುತ್ತಾನೆ. ಇದೇ ಗುರುಗಳ ಸೌಭಾಗ್ಯ.

ಇತ್ತೀಚೆಗೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಶಿಕ್ಷೆ ನೀಡಬಾರದು ಎಂಬ ಕಾನೂನು ಜಾರಿಗೆ ಬಂದಿರುವುದರಿಂದ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಬಗ್ಗೆ ಕಾಳಜಿ ಇಲ್ಲದಂತಾಗಿದೆ. ತನ್ನ ಶಿಷ್ಯ ಕಲಿಯಲಿ ಎಂಬ ಉದ್ದೇಶದಿಂದ ದಂಡಿಸಿದರೆ ಅದೊಂದು ಮಹಾ ಅಪರಾಧ ಎಂಬಂತೆ ಬಿಂಬಿಸಲಾಗುತ್ತಿದೆ. ಮಕ್ಕಳು ಕೇವಲ ಅಂಕಗಳನ್ನು ಗಳಿಸಿದರೆ ಸಾಲದು. ಗುರು ಹಿರಿಯರು, ತಮ್ಮ ಪೋಷಕರಿಗೆ ಗೌರವ ಕೊಡುವ ಸಂಪ್ರದಾಯ ಬೆಳೆಸಿಕೊಳ್ಳಬೇಕಿದೆ. ಹೊರ ದೇಶಗಳಲ್ಲಿ ಭಾರತೀಯ ಸಂಸ್ಕೃತಿಯನ್ನು ಕಲಿಯಬೇಕು, ಗೌರವಿಸಬೇಕೆಂಬ ಮನೋಭಾವ ಮೂಡುತ್ತಿದೆ. ಆದರೆ ನಮ್ಮಲ್ಲಿ ಇದು ಮರೆಯಾಗುತ್ತಿದೆ ಎಂದು ಪ್ರಸನ್ನನಾಥಸ್ವಾಮೀಜಿ ವಿಷಾದಿಸಿದರು.

ಕೃಷಿಯನ್ನು ಕಡೆಗಣಿಸಿ ಕೇವಲ ಐಟಿ ಬಿಟಿ ಎಂದು ಹೋಗುತ್ತಿದ್ದರೆ, ಹಣ ಸಂಪಾದಿಸಬಹುದೇ ವಿನಃ ಅನ್ನವನ್ನಲ್ಲ. ಮುಂದೆ ತಿನ್ನುವ ಅನ್ನಕ್ಕೂ ತತ್ವಾರ ಬಂದರೂ ಆಶ್ಚರ್ಯವಿಲ್ಲ. ಹಾಗಾಗಿ ಮುಂಬರುವ ದಿನಗಳಲ್ಲಿ ಕೃಷಿಗೆ ಹೆಚ್ಚಿನ ಆದ್ಯತೆ ಬರಲಿದೆ. ವಿದ್ಯಾರ್ಥಿಗಳು ವೈಜ್ಞಾನಿಕವಾಗಿ ಕೃಷಿ ಮಾಡಿದಲ್ಲಿ ಮಣ್ಣು ಹೊನ್ನಾಗಲಿದೆ ಎಂದು ಅವರು ತಿಳಿಸಿದರು.

ನಿವೃತ್ತ ಶಿಕ್ಷಕ ಶಿವರಾಮ್ ಮಾತನಾಡಿ ಶಿಕ್ಷಕರು ಮೊದಲು ಪ್ರಾಮಾಣಿಕವಾಗಿರಬೇಕು. ವಿದ್ಯಾರ್ಥಿಗಳಿಗೆ ಮೊದಲು ಶಿಸ್ತು ಕಲಿಸಬೇಕು. ತಮ್ಮ ಮಕ್ಕಳನ್ನು ಉನ್ನತ ಮಟ್ಟಕ್ಕೇರಿಸಬೇಕೆಂದು ಛಲ ಇರಬೇಕು. ವಿದ್ಯಾರ್ಥಿಗಳು ಆರಂಭದಲ್ಲಿ ಕಲಿಯುವ ಪಾಠ ಜೀವನಪರ್ಯಂತ ಇರುತ್ತದೆ. ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಸಂದರ್ಭದಲ್ಲಿ ಉತ್ತಮ ಸ್ನೇಹಿತರನ್ನು ಗಳಿಸಬೇಕು ಎಂದರು.

